# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 63 |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ.ಪಿ.ಎಂ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13-02-2023 |
| ಉತ್ತರಿಸುವ ಸಚಿವರು | : | ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಳೆದ 10 ವರ್ಷಗಳಲ್ಲಿ ಸರ್ಕಾರದ ವತಿಯಿಂದ ನಿರ್ಮಿಸಲಾದ ಪ್ರತಿಮೆಗಳ ಸಂಖ್ಯೆ ಎಷ್ಟು; (ವರ್ಷವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)</td><td>ರಾಜ್ಯದಲ್ಲಿ ಕಳೆದ 10 ವರ್ಷಗಳಲ್ಲಿ ಸರ್ಕಾರದ ವತಿಯಿಂದ ಒಟ್ಟು 05 ಪ್ರತಿಮೆಗಳನ್ನು ಈ ಕೆಳಕಂಡ ಜಿಲ್ಲೆಗಳಲ್ಲಿ ನಿರ್ಮಿಸಲಾಗಿರುತ್ತದೆ.
<table>
<tr><th>ಜಿಲ್ಲೆ</th><th>ವರ್ಷ</th><th>ಪ್ರತಿಮೆಗಳ ಸಂಖ್ಯೆ</th></tr>
<tr><td>ಚಿಕ್ಕಮಗಳೂರು</td><td>2014-15</td><td>01</td></tr>
<tr><td>ಚಿತ್ರದುರ್ಗ</td><td>2015-16</td><td>01</td></tr>
<tr><td>ಬೆಳಗಾವಿ</td><td>2017-18</td><td>01</td></tr>
<tr><td>ಕಲಬುರಗಿ</td><td>2017-18</td><td>01</td></tr>
<tr><td>ಕಾರವಾರ(ಉ.ಕ)</td><td>2022-23</td><td>01</td></tr>
<tr><td></td><td>ಒಟ್ಟು</td><td>05</td></tr>
</table>
</td></tr>
<tr><td>ಆ)</td><td>ಪ್ರತಿಯೊಂದು ಪ್ರತಿಮೆ ನಿರ್ಮಿಸಲು ತಗುಲಿದ ವೆಚ್ಚ ಮತ್ತು ನಿರ್ವಹಣೆ ಮಾಡಲು ವಾರ್ಷಿಕವಾಗಿ ಮಾಡುತ್ತಿರುವ ವೆಚ್ಚದ ವಿವರ ನೀಡುವುದು;</td><td>ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಪ್ರತಿಮೆಗಳನ್ನು ನಿರ್ಮಾಣ ಮಾಡಲು ಬಿಡುಗಡೆ ಮಾಡಲಾಗಿರುವ ಅನುದಾನದ ವಿವರಗಳನ್ನು ಅನುಬಂಧ-1 ರಲ್ಲಿರಿಸಿದೆ<br>ಇಲಾಖೆ ವತಿಯಿಂದ ಪ್ರತಿಮೆ ನಿರ್ವಹಣೆಗೆ ಅನುದಾನ ಬಿಡುಗಡೆ ಮಾಡಲಾಗುವುದಿಲ್ಲ.</td></tr>
<tr><td>ಇ)</td><td>ಸರ್ಕಾರಿ ರಸ್ತೆ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಸಾರ್ವಜನಿಕರು ಪ್ರತಿಮೆಗಳನ್ನು ನಿರ್ಮಿಸಲು ಇರುವ ಮಾರ್ಗಸೂಚಿಗಳು ಯಾವುವು?( ಮಾರ್ಗಸೂಚಿಯ ಪ್ರತಿಯನ್ನು ನೀಡುವುದು)</td><td>ಸರ್ಕಾರದ ಸುತ್ತೋಲೆ ಸಂಖ್ಯೆ: ಕಸಂವಾ 564 ಕಸಧ 2012, ದಿನಾಂಕ:11.06.2012ರಲ್ಲಿ ಪ್ರತಿಮೆಗಳನ್ನು ಸ್ಥಾಪಿಸುವ/ ನಿರ್ಮಿಸುವ ಸಂಬಂಧ ಮಾರ್ಗಸೂಚಿಯನ್ನು ಹೊರಡಿಸಿದ್ದು, ಪ್ರತಿಯನ್ನು ಅನುಬಂಧ-2 ರಲ್ಲಿರಿಸಿದೆ</td></tr>
</table>

ಸಂಖ್ಯೆ: ಕಸಂವಾ 06 ಕವಿಸ 2023

**(ವಿ. ಸುನಿಲ್ ಕುಮಾರ್)**
**ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.**

## ಅನುಬಂಧ-1

| ಕ್ರ. ಸಂ. | ವಿಷಯ | ಮೊತ್ತ |
|---|---|---|
| 1. | 2014-15ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ರಾಷ್ಟ್ರಪಿತ ಮಹಾತ್ಮಗಾಂಧಿ ಭಾಷಣ ಮಾಡಿದ ಸ್ಥಳದಲ್ಲಿ ಸ್ಮಾರಕ ಭವನ ನಿರ್ಮಾಣ ಮಾಡಲು | ರೂ.25.00 ಲಕ್ಷ |
| 2. | 2015-16ನೇ ಸಾಲಿನಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿರುವ ಶ್ರೀ ಮುರುಘಾಮಠದ ಆವರಣದಲ್ಲಿ 325 ಅಡಿ ಎತ್ತರದ ಶ್ರೀ ಜಗಜ್ಯೋತಿ ಬಸವೇಶ್ವರರ ಕಂಚಿನ ಪುತ್ಥಳಿಯನ್ನು ನಿರ್ಮಿಸಲು | ರೂ.30.00ಕೋಟಿ |
| 3. | 2017-18ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ರಾಜ ಹಂಸಗಡ ಬೆಳಗಾವಿ ಛತ್ರಪತಿ ಶಿವಾಜಿ ಮಹಾರಾಜರ ಪ್ರತಿಮೆ ನಿರ್ಮಾಣ ಮಾಡಲು | ರೂ.50.00 ಲಕ್ಷ |
| 4. | 2017-18ನೇ ಸಾಲಿನಲ್ಲಿ ಕಲಬುರಗಿ ಜಿಲ್ಲೆಯ ಆಳಂದ ಪಟ್ಟಣದಲ್ಲಿ ಮಹಾತ್ಮಾ ಬಸವೇಶ್ವರರ ಪುತ್ಥಳಿಯನ್ನು ನಿರ್ಮಿಸಲು | ರೂ.10.00 ಲಕ್ಷ |
| 5. | 2022-23ನೇ ಸಾಲಿನಲ್ಲಿ ಉತ್ತರಕನ್ನಡ ಜಿಲ್ಲೆಯ ದಾಂಡೇಲಿಯಲ್ಲಿ ಶ್ರೀ ಜಗಜ್ಯೋತಿ ಬಸವೇಶ್ವರ ಪುತ್ಥಳಿ ನಿರ್ಮಾಣ ಮಾಡಲು | ರೂ.15.00 ಲಕ್ಷ |
| | ಒಟ್ಟು ಮೊತ್ತ | ರೂ.31.00 ಕೋಟಿ |

(9)

ಅನುಬಂಧ-2

## ಕರ್ನಾಟಕ ಸರ್ಕಾರ

ಸಂಖ್ಯೆ: ಕಸಂವಾಪ್ರ 564 ಕಸಧ 2012

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:11-6-2012.

:: ಸುತ್ತೋಲೆ ::

ವಿಷಯ: ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಪ್ರತಿಷ್ಠಾಪಿಸುವ ಕುರಿತು ಮಾರ್ಗಸೂಚಿಗಳು

ಸಂತರು, ಶರಣರು, ಸ್ವಾತಂತ್ರ್ಯ ಹೋರಾಟಗಾರರು, ಗಣ್ಯ ವ್ಯಕ್ತಿಗಳು ಮುಂತಾದವರು ದೇಶಕ್ಕಾಗಿ ಸಲ್ಲಿಸಿದ ಸೇವೆ, ತ್ಯಾಗ ಮನೋಭಾವಗಳನ್ನು ಸ್ಮರಿಸುವ ಉದ್ದೇಶದಿಂದ ಅಂತಹವರ ಪ್ರತಿಮೆಗಳನ್ನು ಸರ್ಕಾರಿ ಕಛೇರಿಗಳು, ಸಾರ್ವಜನಿಕ ಪ್ರದೇಶಗಳಲ್ಲಿ ಸ್ಥಾಪನೆ ಮಾಡಲಾಗುತ್ತದೆ, ಆದರೆ ಇಂತಹ ಪ್ರತಿಮೆಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಇದ್ದು, ವಿರೂಪಗೊಂಡಿರುವುದು ಇನ್ನಿತರ ಅಹಿತಕರ ಘಟನೆಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಪ್ರತಿಮೆಗಳ ಸ್ಥಾಪನೆಗೆ ಸ್ಪಷ್ಟವಾದ ಮಾರ್ಗಸೂಚಿ ಗಳಿಲ್ಲದಿರುವುದನ್ನು ಮನಗಂಡು ಯಾವುದೇ ಸರ್ಕಾರಿ ಜಾಗದಲ್ಲಿ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪನೆ ಮಾಡುವುದು ಸೂಕ್ತವಲ್ಲವೆಂದು ಪರಿಗಣಿಸಿ ಗಣ್ಯವ್ಯಕ್ತಿಗಳ ಪ್ರತಿಮೆಗಳ ಸ್ಥಾಪನೆಗೆ ಸಂಬಂಧಿಸಿದಂತೆ ಕೆಳಗಿನ ಮಾರ್ಗಸೂಚಿಗಳನ್ನು ಹೊರಡಿಸಿದೆ.

(1) ಸರ್ಕಾರದ/ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ/ಶರಣರ, ಜನ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸುವುದನ್ನು ನಿರ್ಬಂಧಿಸಿದೆ.

(2) ಪ್ರತಿಮೆ ಸ್ಥಾಪಿಸುವುದಕ್ಕೆ ಸಂಘ ಸಂಸ್ಥೆಗಳು ಮುಂದೆ ಬಂದಲ್ಲಿ ಪ್ರಾಥಮಿಕವಾಗಿ ಅಂತಹ ಸಂಘ ಸಂಸ್ಥೆಗಳು ತಮಗೆ ಸೇರಿದ ನಿವೇಶನದಲ್ಲಿ ಪ್ರತಿಮೆಯನ್ನು ನಿರ್ಮಿಸುವ ಹಾಗೂ ಅವುಗಳ ಭದ್ರತೆ ಮತ್ತು ಸಂರಕ್ಷಣೆಗೆ ಸಂಬಂಧಿಸಿದಂತೆ ಮುಚ್ಚಳಿಕೆ ನೀಡತಕ್ಕದ್ದು.

(3) ಮಂಜೂರಾತಿ ಪಡೆದು ಸ್ಥಾಪಿಸಲಾದ ಪ್ರತಿಮೆಗಳ ನಿರ್ವಹಣೆಯನ್ನು ಆಯಾ ಸಂಘ ಸಂಸ್ಥೆಗಳೇ ನಿರ್ವಹಿಸತಕ್ಕದ್ದು.



Generated from eOffice by GEETHA BAI S, KCI-US(GBI), UNDER SECRETARY, KC SEC on 23/11/2022 11:35 AM

(18)

(4) ಪ್ರತಿಮೆ ಸ್ಥಾಪನೆಗೆ ವಿಶೇಷ ಪ್ರಕರಣವಾಗಿ ಸರ್ಕಾರದಿಂದ ನೀಡಲಾಗುವ ಗರಿಷ್ಠ ಅನುದಾನದ ಮೊತ್ತ ರೂ.10.00 ಲಕ್ಷವಾಗಿರುತ್ತದೆ.

11/6

(ಹೆಚ್.ವಿ.ರಾಮಚಂದ್ರರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ.

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಕೆಂಗೇರಿ ಹೊರವಲಯ ಮುದ್ರಣಾಲಯ, ಬೆಂಗಳೂರು - ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು

ಪ್ರತಿ:

1) ಮಹಾಲೇಖಪಾಲರು (ಲೆ&ಲೆ) ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4) ಪೋಲೀಸ್ ಮಹಾನಿರ್ದೇಶಕರು, ನೃಪತುಂಗ ರಸ್ತೆ, ಬೆಂಗಳೂರು
5) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
6) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7) ಪೋಲೀಸ್ ಆಯುಕ್ತರು, ಬೆಂಗಳೂರು ನಗರ, ಇನ್‌ಫ್ಯಾಂಟ್ರಿ ರಸ್ತೆ, ಬೆಂಗಳೂರು
8) ಎಲ್ಲಾ ಜಿಲ್ಲಾಧಿಕಾರಿಗಳು
9) ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು
10) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
11) ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು
12) ನಿರ್ದೇಶಕರು, ವಾರ್ತಾ ಇಲಾಖೆ, ಬೆಂಗಳೂರು (ಪತ್ರಿಕಾ ಪ್ರಕಟಣೆಗಾಗಿ)
13) ಎಲ್ಲಾ ಮಾನ್ಯ ಸಚಿವರ ಆಪ್ತಕಾರ್ಯದರ್ಶಿಗಳು
14) ಸರ್ಕಾರದ ಕಾರ್ಯದರ್ಶಿಗಳು/ಉಪಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸಸೌಧ, ಬೆಂಗಳೂರು
15) ಪತ್ರಿಕಾ ಮೇಜು
16) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು



Generated from eOffice by GEETHA BAI S, KCI-US(GBI), UNDER SECRETARY, KC SEC on 23/11/2022 11:35 AM